ಕರ್ನಾಟಕ ವಿಧಾನಸಭೆ

ಮಂಗಳವಾರ 13ನೇ ಫೆಬ್ರವರಿ 2007ರಂದು

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 11 ಗಂಟೆ 8 ನಿಮಿಷಕ್ಕೆ ಸಮಾವೇಶಗೊಂಡಿತು

ಅಧ್ಯಕ್ಷರು (ಶ್ರೀ ಕೃಷ್ಣರವರು) ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು

(ಸದನವು ಬೆಳಗ್ಗೆ 11 08 ಗಂಟೆಗೆ ಸಮಾವೇಶಗೊಂಡಿತು)

(ಸಭಾಧ್ಯಕ್ಷರು ಪೀಠವನ್ನು ಅಲಂಕರಿಸಿದ್ದರು)

1 ಪ್ರಶ್ನೋತ್ತರ

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ನೀಡಲಾದ ಉತ್ತರಗಳು

ಚುಕ್ಕೆ ಗುರುತಿನ ಪ್ರಶ್ನೆ ಸಂ 151 (1265)

(ಸದಸ್ಯರು ಹಾಜರಿರಲಿಲ್ಲ)

ಚುಕ್ಕೆ ಗುರುತಿನ ಪ್ರಶ್ನೆ ಸಂ 152 (156)

(ಸದಸ್ಯರು ಹಾಜರಿರಲಿಲ್ಲ)

ಹೆಚ್ಚುವರಿಯಾಗಿ ಲಾಂಚ್‌ಗಳನ್ನು ಒದಗಿಸುವುದು

153 (685) ಶ್ರೀ ಗೋಪಾಲಕೃಷ್ಣ ಬೇಳೂರು ಬಿ ಕೆ (ಸಾಗರ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆ ಸಾಗರ ತಾಲ್ಲೂಕಿನ ಶರಾವತಿ ಹಿನ್ನೀರಿನ ಕಳಸವಳ್ಳಿ ಅಂಬಾರಗೋಡ್ಲು ನಡುವೆ ಸಾವಿರಾರು ನಾಗರೀಕರು ಪ್ರಯಾಣಿಸುತ್ತಿರುವವರ ಸಂಖ್ಯೆ ಹೆಚ್ಚಾಗಿದ್ದು ಹೆಚ್ಚುವರಿಯಾಗಿ ಲಾಂಚ್ ಒದಗಿಸುವುದು ಯಾವ ಹಂತದಲ್ಲಿದೆ,

ಆ) ಲಾಂಚನ್ನು ಸಾರ್ವಜನಿಕರಿಗೆ ಬಿಡುಗಡೆಗೊಳಿಸಲು ಎಷ್ಟು ಕಾಲಾವಧಿ ಬೇಕಾಗುವುದು,

ಇ) ಕೂಡಲೇ ಲಾಂಚನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮವೇನು (ವಿವರ ನೀಡುವುದು)?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಶಿವಮೊಗ್ಗ ಜಿಲ್ಲೆ ಸಾಗರ ತಾಲ್ಲೂಕಿನ ಶರಾವತಿ ಹಿನ್ನೀರಿನಲ್ಲಿ ಅಂಬಾರಗೋಡ್ಲು–ಕಳಸವಳ್ಳಿ ನಡುವೆ ಹೆಚ್ಚುತ್ತಿರುವ ಪ್ರಯಾಣಿಕರ ಒತ್ತಡವನ್ನು ಕಡಿಮೆಗೊಳಿಸುವ ಉದ್ದೇಶದಿಂದ ಒಂದು ಹೆಚ್ಚುವರಿ ಲಾಂಚನ್ನು ಒದಗಿಸಲು ಪ್ರಸ್ತಾವನೆಗೆ ಸರ್ಕಾರವು ಈಗಾಗಲೆ ತಾತ್ವಿಕ ಒಪ್ಪಿಗೆ ನೀಡಿರುತ್ತದೆ

ಲಾಂಚ್ ನಿರ್ಮಿಸುವ ಬಗ್ಗೆ ಟೆಂಡರ್ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಲಾಗಿದ್ದು ಪರಿಶೀಲನೆ ಹಂತದಲ್ಲಿರುತ್ತದೆ

ಆ) ಲಾಂಚ್ ನಿರ್ಮಾಣಕ್ಕೆ ಕಾರ್ಯಾದೇಶ ನೀಡಿದ ನಂತರ ಲಾಂಚ್ ನಿರ್ಮಿಸಿ ಒದಗಿಸಲು ಕನಿಷ್ಠ 8 ತಿಂಗಳ ಕಾಲಾವಧಿ ಬೇಕಾಗಿರುತ್ತದೆ

ಇ) ಲಾಂಚ್ ನಿರ್ಮಿಸಲು ಟೆಂಡರ್ ಪ್ರಕ್ರಿಯೆ ಮುಗಿದಿರುವುದರಿಂದ ಅತಿ ಶೀಘ್ರದಲ್ಲಿ ಕಾರ್ಯದೇಶ ನೀಡಿ ಲಾಂಚ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು

ಶ್ರೀ ಬಿಕೆ ಗೋಪಾಲಕೃಷ್ಣ ಬೇಳೂರು ಕಳೆದ ವರ್ಷ ಈ ಲಾಂಚ್ sanction ಆಗಿತ್ತು ಆದರೆ ಲಾಂಚನ್ನು ನಿರ್ಮಿಸುವುದು ತಡವಾಗಿದೆ ಮಂತ್ರಿಗಳು ಒದಗಿಸಿದೆ ಎಂದು ಹೇಳಿದ್ದಾರೆ ಆದರೆ, ಅಲ್ಲಿ ಜನಸಂಖ್ಯೆ ಓಡಾಟ ಬಹಳವಿರುವುದರಿಂದ ಆದಷ್ಟು ಬೇಗ ನಮ್ಮ ಲಾಂಚ್ ಅನ್ನು ಒದಗಿಸಿಕೊಡಬೇಕೆಂದು ತಮ್ಮಲ್ಲಿ ಕೇಳಿಕೊಳ್ಳುತ್ತಿದ್ದೇನೆ

ಶ್ರೀ ಹೆಚ್ ಡಿ ರೇವಣ್ಣ Tender ಎಲ್ಲ finalize ಆಗಿದೆ ಇನ್ನೊಂದು ವಾರದಲ್ಲಿ ಆ tender finalize ಆದ ತಕ್ಷಣ ಹಣ ಕೊಟ್ಟು 8 ತಿಂಗಳೊಳಗೆ ಆ ಕೆಲಸ ಮಾಡುವುದಕ್ಕೆ ಕ್ರಮ ತೆಗೆದುಕೊಳ್ಳುತ್ತೇನೆ

ಅಕ್ರಮ ಮರಳು ಸಾಗಟ

154 (1221) ಶ್ರೀ ಬೋಪಯ್ಯ ಕೆ ಜಿ (ಮಡಿಕೇರಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೇರಳಕ್ಕೆ ಅಕ್ರಮವಾಗಿ ಮರಳು ಸಾಗಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ ಅಕ್ರಮ ಮರಳು ಸಾಗಾಟ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡ ಕ್ರಮವೇನು,